ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು
'ನ್ಯಾಯ ದೇಗುಲ', ಮೊದಲನೇ ಮಹಡಿ, ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು – 560 027
ದೂರವಾಣಿ: 22111729, 22111875, 22111716, ಇಮೇಲ್: mskar-slsa@hck.gov.in

*'ದಿನಾಂಕ 29-07-2024 ರಿಂದ 03-08-2024 ರ ವರೆಗೆ'*

# "ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದಲ್ಲಿ ವಿಶೇಷ ಲೋಕ್-ಅದಾಲತ್"

**ಮಾನ್ಯ ಸರ್ವೋಚ್ಚ ನ್ಯಾಯಾಲಯವು ವಿಶೇಷ ಲೋಕ್ ಅದಾಲತ್** ಅನ್ನು **ದಿನಾಂಕ 29-07-2024 ರಿಂದ 03-08-2024 ರ ವರೆಗೆ** ನಡೆಸಲು ಉದ್ದೇಶಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪಕ್ಷಕಾರರುಗಳಿಗೆ, ಎದುರುದಾರರ ಜೊತೆ ಪೂರ್ವಭಾವಿ ಲೋಕ್ ಅದಾಲತ್‌ಅನ್ನು ನಡೆಸಲು ವಿಡಿಯೋ ಕಾನ್ಫರೆನ್ಸ್ ವ್ಯವಸ್ಥೆ ಮಾಡಲಾಗಿರುತ್ತದೆ. ಎಲ್ಲಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಲ್ಲಿ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳಲ್ಲಿ ವಿಡಿಯೋ ಕಾನ್ಫರೆನ್ಸ್ ಕೇಂದ್ರಗಳನ್ನು ಸ್ಥಾಪಿಸಲು ತೀರ್ಮಾನಿಸಲಾಗಿರುತ್ತದೆ. ಎಲ್ಲಾ ಪಕ್ಷಕಾರರು ವಿಡಿಯೋ ಕಾನ್ಫರೆನ್ಸ್ ಮೂಲಕ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನಡೆಸುವ ಪೂರ್ವಭಾವಿ ಲೋಕ್ ಅದಾಲತ್‌ನಲ್ಲಿ ಭಾಗವಹಿಸಲು ಅನುಕೂಲ ಮಾಡಲಾಗಿರುತ್ತದೆ. ಈ ವಿಶೇಷ ಲೋಕ್ ಅದಾಲತ್‌ನಲ್ಲಿ ರಾಜೀ ಸಂಧಾನಕ್ಕೆ ಗುರುತಿಸಲಾದ ಪ್ರಕರಣಗಳ ಪಟ್ಟಿಯನ್ನು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ವರದಿಯಾಗಿರುತ್ತದೆ. ಇದರಿಂದ ಸದರಿ ಪ್ರಕರಣಗಳಲ್ಲಿನ ಎಲ್ಲಾ ಪಕ್ಷಕಾರರುಗಳು ತಮ್ಮ ವಾಸಸ್ಥಳಗಳ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಲ್ಲಿ ತೆರೆಯಲಾಗಿರುವ ವಿಡಿಯೋ ಕಾನ್ಫರೆನ್ಸ್ ಕೇಂದ್ರಗಳಿಗೆ ಭೇಟಿ ಕೊಟ್ಟು ದಿನಾಂಕ 29-07-2024 ರಿಂದ 03-08-2024 ರ ವರೆಗೆ ನಡೆಯುವ ವಿಶೇಷ ಲೋಕ್ ಅದಾಲತ್‌ನಲ್ಲಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಈ ಮೂಲಕ ಕೋರಲಾಗಿದೆ.

## ಹೆಚ್ಚಿನ ಮಾಹಿತಿಗಾಗಿ:

ವೆಬ್‌ಸೈಟ್: www.kslsa.kar.nic.in ಅನ್ನು ಸಂಪರ್ಕಿಸಬಹುದಾಗಿದೆ ಹಾಗೂ
ಆಯಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಗಳ
ಸದಸ್ಯ ಕಾರ್ಯದರ್ಶಿಯವರನ್ನು ಸಂಪರ್ಕಿಸಬಹುದಾಗಿರುತ್ತದೆ
ಮತ್ತು
ಈ ಕೆಳಗಿನ QR ಕೋಡ್‌ನಲ್ಲಿ ನಮ್ಮ ಟೆಲಿಗ್ರಾಂ ಚಾನಲ್‌ಗೆ ಚಂದಾದಾರರಾಗಿ.

**NALSA ಸಹಾಯವಾಣಿ ಸಂಖ್ಯೆ: 15100**

ಸಹಿ/-
(ಎಂ.ಎಲ್.ರಘುನಾಥ್)
ಸದಸ್ಯ ಕಾರ್ಯದರ್ಶಿ,
ಕ.ರಾ.ಕಾ.ಸೇ.ಪ್ರಾ. ಬೆಂಗಳೂರು